**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 1028/2012**

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವಣ್ಣ @ ಪೂಜಾರಿ ಶಿವಣ್ಣ |
| ತಂದೆಯ ಹೆಸರು | : | ಮಾದಶೆಟ್ಟಿ |
| ವಯಸ್ಸು | : | 80 ವರ್ಷ |
| ಉದ್ಯೋಗ | : | ಅರ್ಚಕರು |
| ವಾಸಸ್ಥಳ | : | ಗೋಳೂರು ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 07.11.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಆರೋಪಿ ನನಗೆ ತಮ್ಮನಾಗಬೇಕು. ದೇವಸ್ಥಾನದಲ್ಲಿ ಪೂಜೆ ಮಾಡುವ ವಿಚಾರವಾಗಿ ನನಗೂ ಮತ್ತು ಆರೋಪಿಗೂ ಬಾಯಿ ಮಾತಿನ ಚರ್ಚೆಯಾಗಿರುತ್ತದೆ. ಇಷ್ಟಕ್ಕೆ ನಾನು ಹೆದರಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಗೆ ಹೋದಾಗ ಪೋಲೀಸರು ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ಸದರಿ ದಾಖಲೆ ದೂರು ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ದೂರನ್ನು ನಿ.ಪಿ-1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು. ನಿ.ಪಿ.-1 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ಆರೋಪಿ ನನಗೆ ಯಾವುದೇ ರೀತಿ ಹಲ್ಲೆ ಮಾಡಿಲ್ಲ, ನನ್ನನ್ನು ಅಕ್ರಮವಾಗಿ ಬಂಧಿಸಿ ಜೀವ ಬೆದರಿಕೆ ಹಾಕಿರುವುದಿಲ್ಲ.

**ಸಿ.ಡಬ್ಲೂ.-1 / ಪಿ.ಡಬ್ಲೂ-1**

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ದಿನಾಂಕ 26.05.2012 ರಂದು ಬೆಳಿಗ್ಗೆ 7.00 ಗಂಟೆ ಸಮಯದಲ್ಲಿ ಉರುಕಾತಮ್ಮ ದೇವಸ್ಥಾನದ ಬಳಿ ಪೂಜೆ ಮಾಡಲು ಹೋದಾಗ ಆರೋಪಿ ನೀನು ಪೂಜೆ ಮಾಡಬಾರದು, ಈ ದೇವಸ್ಥಾನಕ್ಕೂ, ನಿನಗೂ ಯಾವುದೇ ಸಂಬಂಧ ಇಲ್ಲ ಎಂದು ನನ್ನನ್ನು ಅಕ್ರಮವಾಗಿ ಪ್ರತಿಬಂಧಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ತನ್ನ ಬಲಗೈಯಿಂದ ನನ್ನ ಎದೆಯ ಭಾಗಕ್ಕೆ, ಎಡಭುಜಕ್ಕೆ ಹೊಡೆದಿದ್ದಲ್ಲದೆ ಚಾಕುವಿನಿಂದ ನನ್ನ ಎಡ ಕಿವಿಗೆ ಮತ್ತು ನನ್ನ ಹಿಮ್ಮಡಿ ಬಳಿ ಹಲ್ಲೆ ಮಾಡಿದಲ್ಲದೆ, ಕೊಲೆ ಮಾಡಿ ಹೊಳೆಗೆ ಬಿಸಾಕುತ್ತೇನೆಂದು ಜೀವ ಬೆದರಿಕೆ ಹಾಕಿರುತ್ತಾರೆಂದು ಸರಿಯಲ್ಲ. ನಾನು ಈ ವಿಚಾರವಾಗಿ ನಿ.ಪಿ-1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ಹಾಗು ನಾನು ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆ ಕಾರಣದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದಃ ಏನೂ ಇರುವುದಿಲ್ಲ.

**ಮರು ವಿಚಾರಣೆ:** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಹಿ/-**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ನಂಜನಗೂಡು.**